ಗಾರ್ಮೆಂಟ್ಸ್ ಮಹಿಳೆಯರಿಗೆ ಪ್ರತ್ಯೇಕ ಬಸ್ಸು ಒದಗಿಸುವುದು

913 (369); ಶ್ರೀ ಗೋಪಾಲಯ್ಯ ಕೆ. (ಮಹಾಲಕ್ಷ್ಮಿ ಲೇಔಟ್)

ಅ) ಬೆಂಗಳೂರು ನಗರದ ವ್ಯಾಪ್ತಿಯಲ್ಲಿರುವ ಗಾರ್ಮೆಂಟ್ಸ್ ಕಾರ್ಖಾನೆಗಳಲ್ಲಿ ಕೆಲಸ ಮಾಡುತ್ತಿರುವ ಮಹಿಳಾ ಕಾರ್ಮಿಕರ ಸಂಖ್ಯೆ ಎಷ್ಟು;

ಆ) ಈ ಕಾರ್ಮಿಕರಿಗೆ ರಿಯಾಯಿತಿ ದರದಲ್ಲಿ ಬಸ್ ಪಾಸ್ ವ್ಯವಸ್ಥೆ ಮಾಡಲಾಗಿದೆಯೇ;

ಇ) ಮಹಿಳಾ ಕಾರ್ಮಿಕರಿಗೆ ಪ್ರತ್ಯೇಕ ಬಸ್ ವ್ಯವಸ್ಥೆ ಮಾಡಲು ಸರ್ಕಾರ ಪ್ರತ್ಯೇಕ ಬಸ್ ವ್ಯವಸ್ಥೆ ಮಾಡಲು ಸರ್ಕಾರ ನಿರ್ಧರಿಸಿದೆಯೇ;

ಈ) ಹಾಗಿದ್ದಲ್ಲಿ, ಇದಕ್ಕಾಗಿ ಕಾರ್ಖಾನೆ ಮಾಲೀಕರಿಂದ ಇದಕ್ಕೆ ತಗಲುವ ವೆಚ್ಚವನ್ನು ಭರಿಸಲಾಗುವುದೇ;

ಉ) ಈ ವ್ಯವಸ್ಥೆ ಯಾವಾಗಿನಿಂದ ಜಾರಿಗೆ ಬರುತ್ತದೆ;

ಊ) ಕಾಮಾಕ್ಷಿಪಾಳ್ಯ ಮಾಗಡಿ ರಸ್ತೆ ಹಾಗೂ ಸುಂಕದ ಕಟ್ಟೆ ಮುಂತಾದ ಭಾಗಗಳಿಂದ ಹೆಚ್ಚಿನ ಸಂಖ್ಯೆಯಲ್ಲಿ ಮಹಿಳೆಯರು ಗಾರ್ಮೆಂಟ್ಸ್ ಕಾರ್ಖಾನೆಗಳಿಗೆ ಹೋಗುತ್ತಿರುವುದರಿಂದ ಹೆಚ್ಚು ಬಸ್ ವ್ಯವಸ್ಥೆ ಒದಗಿಸಲಾಗುವುದೇ?

ಶ್ರೀ ಪಿ.ಟಿ. ಪರಮೇಶ್ವರ ನಾಯ್ಕ (ಮಾನ್ಯ ಕಾರ್ಮಿಕ ರಾಜ್ಯ ಸಚಿವರು)

ಅ) ಮಹಿಳಾ ಕಾರ್ಮಿಕರ ಸಂಖ್ಯೆ: 1,51,607

ಆ) ಈ ಮಹಿಳಾ ಕಾರ್ಮಿಕರಿಗೆ ರಿಯಾಯಿತಿ ದರದಲ್ಲಿ ಬಸ್‌ಪಾಸ್ ನೀಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಇ) ಮಹಿಳಾ ಕಾರ್ಮಿಕರಿಗೆ ಮೆ॥ ಬಿ.ಎಂ.ಟಿ.ಸಿ ವತಿಯಿಂದ ಪ್ರತ್ಯೇಕ ಬಸ್ ವ್ಯವಸ್ಥೆ ಒದಗಿಸುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಈ) ಇದಕ್ಕಾಗಿ ತಗಲುವ ವೆಚ್ಚವನ್ನು ಕಾರ್ಖಾನೆ ಮಾಲೀಕರು ಭರಿಸುವ ಬಗ್ಗೆ ಅವರೊಂದಿಗೆ ಚರ್ಚಿಸಲಾಗುತ್ತಿದೆ.

ಉ) ಈ ವ್ಯವಸ್ಥೆಯನ್ನು ಸದ್ಯದಲ್ಲಿಯೇ ಜಾರಿಗೆ ತರುವ ನಿಟ್ಟಿನಲ್ಲಿ ಪ್ರಯತ್ನ ಜಾರಿಯಲ್ಲಿರುತ್ತದೆ.

ಊ) ಉದ್ದೇಶಿಸಿದ ಯೋಜನೆಯನ್ನು ಜಾರಿಗೆ ತಂದ ನಂತರ ಎಲ್ಲಾ ಗಾರ್ಮೆಂಟ್ಸ್ ಕಾರ್ಖಾನೆಗಳ ಕಾರ್ಮಿಕರಿಗೆ ಸೌಲಭ್ಯ ಸಿಗುತ್ತದೆ.

ತಾಂಡಾಗಳನ್ನು ಕಂದಾಯ ಗ್ರಾಮಗಳಾಗಿ ಪರಿವರ್ತಿಸುವುದು

914 (768); ಶ್ರೀ ಗುರುಪಾದಗೌಡ ಸಂಗನಗೌಡ ಪಾಟೀಲ (ರೋಣ)

ಅ) ಗದಗ ಜಿಲ್ಲೆಯಲ್ಲಿರುವ ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತನೆ ಮಾಡಲು ಸರ್ಕಾರಕ್ಕೆ ಬಂದ ಪ್ರಸ್ತಾವನೆಗಳೆಷ್ಟು; (ವಿವರ ನೀಡುವುದು)

ಆ) ರೋಣ ಮತ್ತು ಮುಂಡರಗಿ ತಾಲ್ಲೂಕಿನಲ್ಲಿ ಇರತಕ್ಕಂತಹ ತಾಂಡಾಗಳೆಷ್ಟು;

ಇ) ಈ ತಾಂಡಾಗಳನ್ನು ಕಂದಾಯ ಗ್ರಾಮಗಳನ್ನಾಗಿ ಪರಿವರ್ತನೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಈ) ಹಾಗಿದ್ದಲ್ಲಿ, ಈ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲು ಇರುವ ಕಾಲಮಿತಿ ಏನು?

ಶ್ರೀ ವಿ. ಶ್ರೀನಿವಾಸ ಪ್ರಸಾದ್ (ಮಾನ್ಯ ಕಂದಾಯ ಸಚಿವರು)

ಅ) ಒಂದು ಪ್ರಸ್ತಾವನೆಯು ಸ್ವೀಕೃತವಾಗಿದ್ದು, ಇದು ಭಾರತ ನಗರವೆಂಬ ಕಂದಾಯ ಗ್ರಾಮವನ್ನು ರಚಿಸುವುದಕ್ಕೆ ಸಂಬಂಧಿಸಿರುತ್ತದೆ.

ಆ) ರೋಣ–21 ತಾಂಡಾಗಳು
ಮುಂಡರಗಿ–13 ತಾಂಡಾಗಳು